# 2 ಇಎಸ್‌ಐ ವೈದ್ಯ ಕಾಲೇಜುಗಳಲ್ಲಿ ತಲಾ 25 ಸೀಟು ಹೆಚ್ಚಳ

**ಬೆಂಗಳೂರು:** ಆರ್ಥಿಕವಾಗಿ ಹಿಂದುಳಿದ ಮೇಲ್ವರ್ಗದ ಬಡವರಿಗೆ ಶಿಕ್ಷಣ ಹಾಗೂ ಉದ್ಯೋಗದಲ್ಲಿ ಶೇ 10ರಷ್ಟು ಮೀಸಲು ಸೌಲಭ್ಯ ಕಲ್ಪಿಸಲು ಕೇಂದ್ರ ಸರಕಾರ ಆದೇಶ ಹೊರಡಿಸಿರುವ ಹಿನ್ನೆಲೆಯಲ್ಲಿ ರಾಜ್ಯದ ಬೆಂಗಳೂರು ಹಾಗೂ ಕಲಬುರ್ಗಿ ಇಎಸ್‌ಐ ವೈದ್ಯ ಕಾಲೇಜುಗಳ ಸೀಟುಗಳ ಸಂಖ್ಯೆಯನ್ನು ತಲಾ 25ರಷ್ಟು ಹೆಚ್ಚಳ ಮಾಡಲಾಗಿದೆ.

**ಇಡಬ್ಲ್ಯುಎಸ್ ಕೋಟಾ**

2019-20ನೇ ಶೈಕ್ಷಣಿಕ ಸಾಲಿನಲ್ಲಿ ವೈದ್ಯಕೀಯ ಕೋರ್ಸ್‌ಗಳ ಪ್ರವೇಶ ಪ್ರಕ್ರಿಯೆ ಸಂದರ್ಭದಲ್ಲಿ ಈ ವರ್ಗದ ಕೋಟಾದ ಅಭ್ಯರ್ಥಿಗಳಿಗೆ ಶೇ 10ರಷ್ಟು ಮೀಸಲಾತಿ ಕಲ್ಪಿಸುವಂತೆ ಎಂಸಿಐ ಕೋರಿದ ಹಿನ್ನೆಲೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಇಡಬ್ಲ್ಯುಎಸ್ ಕೋಟಾದಡಿ ಸೀಟುಗಳನ್ನು ಭರ್ತಿ ಮಾಡುವಂತೆ ಸಂಬಂಧಪಟ್ಟ ಪ್ರಾಧಿಕಾರಗಳಿಗೆ ಸೂಚಿಸಿದೆ.

ಬೆಂಗಳೂರು ಹಾಗೂ ಕಲಬುರ್ಗಿಯ ಇಎಸ್‌ಐ ವೈದ್ಯ ಕಾಲೇಜುಗಳಲ್ಲಿ ಇದುವರೆಗೆ ತಲಾ 100 ವೈದ್ಯ ಸೀಟುಗಳು ಲಭ್ಯವಾಗುತ್ತಿದ್ದವು. ಈ ಬಾರಿ ತಲಾ 25 ಸೀಟುಗಳನ್ನು ಹೆಚ್ಚಿಸಲಾಗಿದೆ. ಇದರಿಂದ ಎರಡೂ ಕಾಲೇಜುಗಳಲ್ಲಿ ಒಟ್ಟು 50 ಹೆಚ್ಚುವರಿ ಸೀಟುಗಳು ಲಭ್ಯವಾಗಲಿವೆ. ಕಾರವಾರ ಸರಕಾರಿ ವೈದ್ಯ ಕಾಲೇಜಿನ ಪ್ರಕರಣ ಹೈಕೋರ್ಟ್‌ನಲ್ಲಿ ಇತ್ಯರ್ಥವಾಗಿದ್ದು, ಹೆಚ್ಚುವರಿಯಾಗಿ 150 ವೈದ್ಯ ಸೀಟುಗಳು ಲಭ್ಯವಾಗಲಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.